ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1343
2) ಸದಸ್ಯರ ಹೆಸರು : ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು)
3) ಉತ್ತರಿಸುವ ದಿನಾಂಕ : 18-03-2020
4) ಉತ್ತರಿಸಬೇಕಾದ ಸಚಿವರು : ಮುಜರಾಯಿ, ಮೀನುಗಾರಿಕೆ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

	ಪ್ರಶ್ನೆ	ಉತ್ತರ
ಅ)	ಕೇಂದ್ರ ಮತ್ತು ರಾಜ್ಯದ ಅನುದಾನದ ಪಾಲು ಹಂಚಿಕೆ ಸಂಬಂಧಿಸಿದ ತಗಾದೆಯಿಂದ ಮಂಗಳೂರು ಹಳೇ ಬಂದರಿನ ಮೂರನೇ ಹಂತದ ಮೀನುಗಾರಿಕೆ ಜೆಟ್ಟಿ ವಿಸ್ತರಣಾ ಯೋಜನೆ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು. ಸದರಿ ಯೋಜನೆಯನ್ನು ಕೇಂದ್ರ ಪುರಸ್ಕೃತ ಯೋಜನೆಯಡಿ ಕೈಗೊಳ್ಳಲಾಗಿರುತ್ತದೆ. ಈ ಯೋಜನೆಯ ಅನುಷ್ಠಾನದ ವೇಳೆ ಕಾಮಗಾರಿಯಲ್ಲಾದ ವಿನ್ಯಾಸ ಬದಲಾವಣೆಯಿಂದ ಹಾಗೂ ಸದರಿ ಯೋಜನೆಯ ಕುರಿತು ಘನವೆತ್ತ ಉಚ್ಚ ನ್ಯಾಯಾಲಯ ಹಾಗೂ ರಾಷ್ಟ್ರೀಯ ಹಸಿರು ಪೀಠ ನ್ಯಾಯಮಂಡಳಿ, ನವದೆಹಲಿ ಇಲ್ಲಿ ಹೂಡಲಾದ ದಾವೆಯ ಕಾರಣದಿಂದ ಈ ಯೋಜನೆ ವಿಳಂಬವಾಗಿರುತ್ತದೆ.
ಆ)	ಬಂದಿದ್ದಲ್ಲಿ, ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)	ಸದರಿ ಯೋಜನೆಯ ಅನುಷ್ಠಾನಕ್ಕನುಗುಣವಾಗಿ ಕೇಂದ್ರ ಸರ್ಕಾರದ ಪಾಲಿನ ರೂ.1510.00 ಲಕ್ಷಗಳು ಬಿಡುಗಡೆಗೆ ಬಾಕಿ ಇದ್ದು, ಈ ಮೊತ್ತವನ್ನು ಬಿಡುಗಡೆಗೊಳಿಸುವಂತೆ ಕೇಂದ್ರ ಸರ್ಕಾರವನ್ನು ಈಗಾಗಲೇ ಕೋರಲಾಗಿದೆ. ಈ ಯೋಜನೆಯು 2010-11ನೇ ಸಾಲಿನಲ್ಲಿ ಅನುಮೋದನೆಗೊಂಡ ಯೋಜನೆಯಾಗಿದ್ದು, ಕಾಮಗಾರಿಯ ಗುತ್ತಿಗೆದಾರರು 7 ವರ್ಷದ ಹಳೆಯ ದರಗಳಲ್ಲಿ ಕಾಮಗಾರಿಯನ್ನು ನಿರ್ವಹಿಸಲು ಸಾಧ್ಯವಿಲ್ಲವೆಂದು ತಿಳಿಸಿ, ಸದರಿ ಕಾಮಗಾರಿಯ ಗುತ್ತಿಗೆ ಕರಾರನ್ನು ಮುಕ್ತಾಯಗೊಳಿಸುವಂತೆ ಕೋರಿ ಒಪ್ಪಿಗೆ ಪತ್ರವನ್ನು ನೀಡಿರುತ್ತಾರೆ. ಅದರಂತೆ, ಕಾಮಗಾರಿಯ ಉಳಿದ ಘಟಕಗಳನ್ನು ಬೇರೆ ಗುತ್ತಿಗೆದಾರರಿಂದ ಪೂರ್ಣಗೊಳಿಸಲು ಪೂರಕ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಸಂಖ್ಯೆ: ಪಸಂಮೀ ಇ-76 ಮೀಇಯೋ 2020

(ಕೋಟ ಶ್ರೀನಿವಾಸ ಪೂಜಾರಿ)
ಮುಜರಾಯಿ, ಮೀನುಗಾರಿಕೆ ಹಾಗೂ
ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು